ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಅರಣ್ಯ ಇಲಾಖೆಯ ವಿವಿಧ ವೃಂದಗಳ ಜೇಷ್ಠತಾ ಪಟ್ಟಿಯ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

12 (42) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಅರಣ್ಯ ಇಲಾಖೆಯ ವಿವಿಧ ವೃಂದಗಳ ಜೇಷ್ಠತಾ ಪಟ್ಟಿಯನ್ನು ಸರ್ಕಾರ ರಚಿಸಿದ ಸಮಿತಿಯ ವರದಿಯಂತೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಿದೆಯೇ;

(ಆ) ಉಪ ವಲಯ ಅರಣ್ಯಾಧಿಕಾರಿ ವೃಂದದ ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸದಿರಲು ಕಾರಣವೇನು;

(ಇ) ವಲಯ ಅರಣ್ಯಾಧಿಕಾರಿ ವೃಂದದ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಪ್ರಕಟಿಸುವಾಗ ಮುಂಬಡ್ತಿ ನೌಕರರ ಅಂತರ ಜೇಷ್ಠತೆಯನ್ನು ಪೋಷಕ ವೃಂದವಾದ ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪರಿಗಣಿಸದೇ ತಯಾರಿಸಿರುವುದು ನಿಜವೇ; ಇದರಿಂದಾಗಿ ಅರಣ್ಯಾಧಿಕಾರಿಗಳು ಸೇವಾ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ ಲೋಪಗಳನ್ನು ಸರಿಪಡಿಸುವ ಕುರಿತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕಲ್ಯಾಣ ಸಮಿತಿಯು ಪತ್ರವನ್ನು ಬರೆದಿದ್ದರೂ ಸಹ ಯಾವುದೇ ಕ್ರಮವನ್ನು ಅನುಸರಿಸದಿರುವ ಅಧಿಕಾರಿ/ನೌಕರರುಗಳ ಮೇಲೆ ಕೈಗೊಂಡಿರುವ ಕ್ರಮಗಳೇನು? (ವಿವರಗಳನ್ನು ಒದಗಿಸುವುದು)